ರಾಜ್ಯದಲ್ಲಿ ರೇಷ್ಮೆ ಬೆಳೆಗಾರರ ಸಮಸ್ಯೆ

1111 (52) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ರೇಷ್ಮೆ ಉದ್ಯಮದಲ್ಲಿ ತೊಡಗಿರುವವರ ಸಂಖ್ಯೆ ಎಷ್ಟು ?

ಆ) ರಾಜ್ಯದಲ್ಲಿರುವ ರೇಷ್ಮೆ ಬೆಳೆಗಾರರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಈ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ರೇಷ್ಮೆ ಬೆಳೆಗಾರರ ಕುಟುಂಬಗಳು - 254155

ರೀಲರ್‌ಗಳು - 13538

ಆ) ಬಂದಿದೆ, ಚೈನಾ ದೇಶದಿಂದ ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆ ಆಮದು ಆಗುತ್ತಿದ್ದುದು, ಮಳೆ ಅಭಾವದಿಂದ ಬರಗಾಲ ಎದುರಿಸುತ್ತಿದ್ದು ರೇಷ್ಮೆ ಗೂಡು ಮತ್ತು ರೇಷ್ಮೆ ನೂಲಿನ ದರಗಳು ಇಳಿಕೆಯಾಗುತ್ತಿದ್ದು, ಈ ಕಾರಣಗಳಿಂದ ರಾಜ್ಯದ ರೇಷ್ಮೆ ಬೆಳೆಗಾರರು ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಇ) ರಾಜ್ಯದಲ್ಲಿ ರೇಷ್ಮೆ ಉದ್ಯಮದ ಸಮಗ್ರ ಬೆಳವಣಿಗೆಗೆ ಹಾಗೂ ರೇಷ್ಮೆ ಬೆಳೆಗಾರರ ಮತ್ತು ರೀಲರ್‌ಗಳ ಹಿತಕಾಪಾಡಲು ಈ ಕೆಳಗಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

1. ರೇಷ್ಮೆ ಗುಣಮಟ್ಟ ಉತ್ಪಾದನೆ ಮತ್ತು ಉತ್ಪಾದಕತೆ ಹೆಚ್ಚಿಸಲು ಹೊಸ ತಾಂತ್ರಿಕತೆಗಳ ಅಳವಡಿಕೆ ಬಗ್ಗೆ ರೇಷ್ಮೆ ಬೆಳೆಗಾರರಿಗೆ ಮತ್ತು ರೇಷ್ಮೆ ನೂಲು ಬಿಚ್ಚಾಣಿಕೆಯಲ್ಲಿ ರೀಲರುಗಳಿಗೆ ತಿಳುವಳಿಕೆ ನೀಡಲಾಗುತ್ತಿದೆ.
2. ಹೊಸತಳಿಯ ಹಿಪ್ಪುನೇರಳೆ ಹಾಗೂ ಹೊಸ ದ್ವಿತಳಿಗಳನ್ನು ಕ್ಷೇತ್ರ ಮಟ್ಟದಲ್ಲಿ ಬಿಡುಗಡೆ ಮಾಡಲಾಗಿದೆ.
3. ರೇಷ್ಮೆ ಬೆಳೆಗಾರರು ಮತ್ತು ರೀಲರ್‌ಗಳನ್ನು ಪ್ರೋತ್ಸಾಹಿಸಲು ವಿವಿಧ ಕಾರ್ಯಕ್ರಮಗಳಲ್ಲಿ ಸಾಲ ಸೌಲಭ್ಯ ಮತ್ತು ಸಹಾಯ ಒದಗಿಸಲಾಗುತ್ತಿದೆ.
4. ರೇಷ್ಮೆ ಬೆಳೆಗಳನ್ನು ಯಶಸ್ವಿಯಾಗಿ ಬೆಳೆಯಲು ಇಲಾಖೆಯಿಂದ ಉಚಿತವಾಗಿ ಬಿತ್ತನೆ ಪ್ರದೇಶಗಳಲ್ಲಿ ಸಾಮೂಹಿಕ ಸೋಂಕು ನಿವಾರಣೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ.
5. ಸರ್ಕಾರಿ ಬಿತ್ತನೆ ಕೋಠಿಗಳಲ್ಲಿ ಗುಣಮಟ್ಟದ ರೇಷ್ಮೆ ಮೊಟ್ಟೆಗಳನ್ನು ಉತ್ಪಾದಿಸಿ ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.
6. ರೇಷ್ಮೆ ಗೂಡಿನ ಬೆಲೆ ಕುಸಿದಿದ್ದು ರೇಷ್ಮೆ ಬೆಳೆಗಾರರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದಿಂದ ದಿನಾಂಕ 16-09-2002 ರಿಂದ 15-12-2002 ರವರೆಗೆ ರೇಷ್ಮೆ ಗೂಡು ಮಾರುಕಟ್ಟೆಗಳಲ್ಲಿ ವಹಿವಾಟಾದ ಪ್ರತಿ ಕೆಜಿ. ಗೂಡಿಗೆ ರೂ. 10.00 ರ ಸಹಾಯಧನ ನೀಡಲಾಗುತ್ತಿದೆ.
7. ಚೈನಾ ದೇಶದ ರೇಷ್ಮೆ ಸುರಿ ನೀತಿ ವಿರುದ್ಧ ಇಲಾಖೆ ಮತ್ತು ಕೇಂದ್ರ ರೇಷ್ಮೆ ಮಂಡಳಿಯು ಸಲ್ಲಿಸಿದ ಮನವಿಯು ಪುರಸ್ಕೃತವಾಗಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕೆ ಮಂತ್ರಾಲಯವು ದಿನಾಂಕ 20-12-2002ರ ಅಧಿಸೂಚನೆಯಲ್ಲಿ ಚೈನಾ

ದೇಶವು ಎಂಟಿ ಡಂಪಿಂಗ್ ಶುಲ್ಕ ಸೇರಿ ಕನಿಷ್ಠ 33.19 ರ ಅಮೇರಿಕನ್ ಡಾಲರ್‌ಗಳಿಗೆ ಕಡಿಮೆ ಇಲ್ಲದ ದರದಲ್ಲಿ 2ಎ ಮತ್ತು ಅದಕ್ಕಿಂತ ಕಡಿಮೆ ಗುಣಮಟ್ಟದ ರೇಷ್ಮೆಯನ್ನು ಭಾರತ ದೇಶಕ್ಕೆ ರಫ್ತು ಮಾಡಬಹುದೆಂದು ಅಧಿಸೂಚಿಸಿದೆ. ಇದರಿಂದ ರಾಜ್ಯದ ರೇಷ್ಮೆ ಗೂಡಿನ : ಕಚ್ಚಾ ರೇಷ್ಮೆಯ ಧಾರಣೆಗಳಲ್ಲಿ ಏರಿಕೆ ಕಂಡು ಬಂದು ರಾಜ್ಯದ ರೇಷ್ಮೆ ಉದ್ಯಮವು ಅಭಿವೃದ್ಧಿ ಹೊಂದಬಹುದೆಂದು ಆಶಾಕಿರಣ ಮೂಡಿದೆ.

ಬೈಲಹೊಂಗಲ, ಸವದತ್ತಿಗಳಲ್ಲಿ ಅಂತರ್ಜಲ ಹೆಚ್ಚಿಸುವುದು

1112 (1275) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ತಾಲ್ಲೂಕುಗಳಲ್ಲಿ ಅಂತರ್ಜಲ ಕಡಿಮೆ ಇರುವುದರಿಂದ ಕಪ್ಪು ಪ್ರದೇಶಗಳೆಂದು ಘೋಷಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ?

ಆ) ಬೆಳಗಾವಿ ಜಿಲ್ಲೆಯಲ್ಲಿ ಯಾವ-ಯಾವ ತಾಲ್ಲೂಕುಗಳಲ್ಲಿ ಅಂತರ್ಜಲ ಕಡಿಮೆ ಇರುವುದರಿಂದ ಕಪ್ಪು ಪ್ರದೇಶಗಳೆಂದು ಘೋಷಿಸಲಾಗಿದೆ ?

ಇ) ಈ ಘೋಷಿತ ತಾಲ್ಲೂಕುಗಳಲ್ಲಿ ಅಂತರ್ಜಲ ಹೆಚ್ಚಿಸಲು ಯಾವ-ಯಾವ ವಿಶೇಷ ಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಹಣಕಾಸಿನ ಯಾವ ವ್ಯವಸ್ಥೆಯನ್ನು ಮಾಡಲಾಗಿದೆ ?

ಈ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಅಂತರ್ಜಲ ಹೆಚ್ಚಿಸಲು ಯಾವ-ಯಾವ ಕೆಲಸಗಳನ್ನು ತೆಗೆದುಕೊಳ್ಳಲಾಗಿದೆ ; ಅವು ಈಗ ಯಾವ ಹಂತದಲ್ಲಿದೆ ?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :

ಅ) ರಾಜ್ಯದಲ್ಲಿ ಒಟ್ಟು 21 ತಾಲ್ಲೂಕುಗಳನ್ನು ಕಪ್ಪು ಮತ್ತು 22 ತಾಲ್ಲೂಕುಗಳನ್ನು ಬೂದು ಪ್ರದೇಶಗಳೆಂದು ಘೋಷಿಸಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಬೆಳಗಾವಿ ಜಿಲ್ಲೆಯಲ್ಲಿ ಚಿಕ್ಕೋಡಿ ಮತ್ತು ಹುಕ್ಕೇರಿ ತಾಲ್ಲೂಕುಗಳನ್ನು ಕಪ್ಪು ಪ್ರದೇಶ ಗಳೆಂದು ಘೋಷಿಸಲಾಗಿದೆ.

ಇ) ಬೆಳಗಾವಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಇಲಾಖೆಯು ಕ್ಲಿಷ್ಟಕರವಾದ ಪ್ರದೇಶಗಳಲ್ಲಿ ವಿವಿಧ ಅಂತರ್ಜಲ ಕೃತಕ ಮರು ಪೂರೈಕೆ ರಚನೆಗಳನ್ನು ನಿರ್ಮಾಣ ಕಾರ್ಯಕ್ರಮವನ್ನು ಹಮ್ಮಿಕೊಂಡು ಒಟ್ಟು 62 ಸಂಖ್ಯೆಯ ವಿವಿಧ ರಚನೆಗಳನ್ನು ನಿರ್ಮಾಣ ಮಾಡಲಾಗಿದೆ. ಜಲಸಂಪನ್ಮೂಲ ಕ್ರೋಢೀಕರಣ ಯೋಜನೆ - ಅಂತರ್ಜಲ ಭಾಗ (Water Resources Consolidation Project - Ground Water Component) ಯಡಿಯಲ್ಲಿ ಕಾರ್ಯಕ್ರಮವನ್ನು ರೂಪಿಸಲಾಗಿದ್ದು, ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 5979 ರಚನೆಗಳನ್ನು ನಿರ್ಮಾಣ ಮಾಡಲು ಯೋಜಿಸಲಾಗಿದೆ. ಇದಕ್ಕೆ ಯೋಜಿಸಿರುವ ಅಂದಾಜು ವೆಚ್ಚ ರೂ. 4717.80 ಲಕ್ಷಗಳು.

ಈ) ಬೈಲಹೊಂಗಲ ತಾಲ್ಲೂಕಿನಲ್ಲಿ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು 17 ಸಂಖ್ಯೆಯ ವಿವಿಧ ಅಂತರ್ಜಲ ಕೃತಕ ಮರು ಪೂರೈಕೆ ರಚನೆಗಳನ್ನು ನಿರ್ಮಾಣ ಮಾಡಲಾಗಿದೆ. ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. ಸವದತ್ತಿ ತಾಲ್ಲೂಕು ಬಿಳಿ ಪ್ರದೇಶವಾಗಿರುವುದರಿಂದ ಯಾವುದೇ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ.